## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ನೇಕಾರರು ನೇಕಾರಿಕೆ ಉದ್ದೇಶಕ್ಕಾಗಿ ನೇಕಾರರ ಸಹಕಾರ ಸಂಘಗಳು, ಜಿಲ್ಲಾ ಕೇಂದ್ರ ಸಹಕಾರಿ ಬ್ಯಾಂಕುಗಳು, ಪಟ್ಟಣ ಸಹಕಾರಿ ಬ್ಯಾಂಕುಗಳು, ವಿವಿಧೋದ್ದೇಶ ಸಹಕಾರ ಸಂಘಗಳು, ಕೈಗಾರಿಕಾ ಸಹಕಾರ ಬ್ಯಾಂಕ್‌ಗಳು, ಇತರೆ ಸಹಕಾರಿ ಬ್ಯಾಂಕ್‌ಗಳು, ಸೌಹಾರ್ದ ಸಹಕಾರಿ / ಸೌಹಾರ್ದ ಸಹಕಾರಿ ಬ್ಯಾಂಕ್, ಕೃಷಿ ಪತ್ತಿನ ಸಹಕಾರಿ ಸಂಘಗಳು, ಕೃಷಿಯೇತರ ಪತ್ತಿನ ಸಹಕಾರ ಸಂಘಗಳಿಂದ ಸಾಲ ಪಡೆದು ದಿನಾಂಕ: 30.06.2017ಕ್ಕೆ ಹೊಂದಿರುವ ಹೊರಬಾಕಿಯಲ್ಲಿ ರೂ. 50,000/- ಗಳವರೆಗಿನ ಸಾಲ ಮನ್ನಾ ಮಾಡುವ ಬಗ್ಗೆ ಹೊರಡಿಸಲಾದ ಆದೇಶದ ಷರತ್ತುಗಳಲ್ಲಿನ ಅಂಶಗಳನ್ನು ಪರಿಷ್ಕರಿಸುವ ಬಗ್ಗೆ.

ಓದಲಾಗಿದೆ:
1. ಸರ್ಕಾರಿ ಆದೇಶ ಸಂಖ್ಯೆ: ವಾಕೈ 57 ಜಕೈಯೋ 2017, ದಿನಾಂಕ: 13.12.2017
2. ಸರ್ಕಾರಿ ಆದೇಶ ಸಂಖ್ಯೆ: ವಾಕೈ 57 ಜಕೈಯೋ 2017 (ಭಾ), ದಿನಾಂಕ: 29.01.2018.
3. ಸರ್ಕಾರಿ ಆದೇಶ ಸಂಖ್ಯೆ:ವಾಕೈ 57 ಜಕೈಯೋ 2017 ದಿನಾಂಕ:20.2.2018
4. ಜವಳಿ ಅಭಿವೃದ್ಧಿ ಆಯುಕ್ತರ ಪತ್ರ ಸಂಖ್ಯೆ: ಕೈಜಇ/ ಕೈಮಗ್ಗ/ ಅಧೀ/ ಸಾಲ ಮನ್ನಾ/ಸ್ಪಷ್ಟೀಕರಣ/2017-18/1096, ದಿನಾಂಕ: 08.03.2018.

- - -

**ಪ್ರಸ್ತಾವನೆ:-**

ಮೇಲೆ ಓದಲಾದ (1)ರ ಸರ್ಕಾರಿ ಆದೇಶದಲ್ಲಿ, ಕರ್ನಾಟಕ ರಾಜ್ಯದಲ್ಲಿ ಕಳೆದ 03 ವರ್ಷಗಳಿಂದ ತಲೆದೋರಿರುವ ಭೀಕರ ಬರಗಾಲದ ಹಿನ್ನೆಲೆಯಲ್ಲಿ, ರಾಜ್ಯದ ಬಹುತೇಕ ತಾಲ್ಲೂಕುಗಳನ್ನು ಬರಪೀಡಿತ ಪ್ರದೇಶಗಳೆಂದು ಘೋಷಿಸಲಾಗಿದೆ. ಬರದ ಹಿನ್ನೆಲೆಯಲ್ಲಿ, ರೈತರು ಸಂಕಷ್ಟದಲ್ಲಿರುವುದನ್ನು ಮನಗಂಡು ರೈತರು ಪಡೆದ ಕೃಷಿ ಸಾಲವನ್ನು ಸರ್ಕಾರವು ಮನ್ನಾ ಮಾಡಲು ಕ್ರಮವಹಿಸಿದ ರೀತಿಯಲ್ಲೇ ರಾಜ್ಯದ ನೇಕಾರರೂ ಸಹ ಬರಗಾಲದ ಹಿನ್ನೆಲೆಯಲ್ಲಿ ಸಂಕಷ್ಟವನ್ನು ಅನುಭವಿಸುತ್ತಿರುವುದರಿಂದ, ನೇಕಾರರು ವಿವಿಧ ಸಹಕಾರ ಬ್ಯಾಂಕುಗಳಿಂದ / ಸಂಘಗಳಿಂದ ಪಡೆದ ರೂ.50,000/-ಗಳ ಸಾಲವನ್ನು ಮನ್ನಾ ಮಾಡಲಾಗಿದೆ.

ಮೇಲೆ ಓದಲಾದ(2) ಮತ್ತು (3) ರ ಸರ್ಕಾರಿ ಆದೇಶಗಳಲ್ಲಿ, ನೇಕಾರರು ನೇಕಾರಿಕೆ ಉದ್ದೇಶಕ್ಕಾಗಿ ನೇಕಾರರ ಸಹಕಾರ ಸಂಘಗಳು, ಜಿಲ್ಲಾ ಕೇಂದ್ರ ಸಹಕಾರಿ ಬ್ಯಾಂಕುಗಳು, ಪಟ್ಟಣ ಸಹಕಾರಿ ಬ್ಯಾಂಕುಗಳು, ವಿವಿಧೋದ್ದೇಶ ಸಹಕಾರ ಸಂಘಗಳು, ಕೈಗಾರಿಕಾ ಸಹಕಾರ ಬ್ಯಾಂಕ್‌ಗಳು, ಇತರೆ ಸಹಕಾರಿ ಬ್ಯಾಂಕ್‌ಗಳು, ಸೌಹಾರ್ದ ಸಹಕಾರಿ / ಸೌಹಾರ್ದ ಸಹಕಾರಿ ಬ್ಯಾಂಕ್, ಕೃಷಿ ಪತ್ತಿನ ಸಹಕಾರಿ ಸಂಘಗಳು, ಕೃಷಿಯೇತರ ಪತ್ತಿನ ಸಹಕಾರ ಸಂಘಗಳಿಂದ ಸಾಲ ಪಡೆದು ದಿನಾಂಕ: 30.06.2017ಕ್ಕೆ ಹೊಂದಿರುವ ಹೊರಬಾಕಿಯಲ್ಲಿ ರೂ.50,000/-ಗಳವರೆಗಿನ (ಐವತ್ತು ಸಾವಿರ ರೂಪಾಯಿಗಳು ಮಾತ್ರ) ಸಾಲ (ಅಸಲು ಮತ್ತು ಬಡ್ಡಿ ಸೇರಿ) ಮನ್ನಾ ಮಾಡುವ ಬಗ್ಗೆ ಹೊರಡಿಸಲಾದ ಆದೇಶದ ಅನುಬಂಧದ ಕೆಲವು ಅಂಶಗಳನ್ನು ಪರಿಷ್ಕರಿಸಿ ಆದೇಶ ಹೊರಡಿಸಲಾಗಿರುತ್ತದೆ.

ಮೇಲೆ ಓದಲಾದ (4) ರಲ್ಲಿ ಜವಳಿ ಅಭಿವೃದ್ಧಿ ಆಯುಕ್ತರು ಹಾಗೂ ನಿರ್ದೇಶಕರು, ಕೈಮಗ್ಗ ಮತ್ತು ಜವಳಿ ಇಲಾಖೆ, ಇವರು ಪ್ರಸ್ತಾವನೆ ಸಲ್ಲಿಸುತ್ತಾ, ಸರ್ಕಾರಿ ಆದೇಶ ದಿನಾಂಕ:13.12.2017ರ ಕಂಡಿಕೆ 4 ರ ಪ್ರಕಾರ ದಿನಾಂಕ:01.7.2017 ರಿಂದ 12.12.2017ರ ಅವಧಿಯಲ್ಲಿ ಸಾಲ ಮರುಪಾವತಿಸಿದ/ಪಾವತಿಸಬೇಕಾದ ನೇಕಾರರಿಗೆ ಈ ಯೋಜನೆಯ ಲಾಭ ದೊರಕದೇ ಇರುವುದರಿಂದ ಕಂಡಿಕೆ 4ರ ಷರತ್ತನ್ನು ಪರಿಷ್ಕರಿಸಿ, ನೇಕಾರರು ತಮ್ಮ ಹೊರಬಾಕಿ ಸಾಲವನ್ನು ದಿನಾಂಕ:30.6.2018ರೊಳಗಾಗಿ ಪಾವತಿಸಿದಲ್ಲಿ ಯೋಜನೆಯ ಅಡಿ ಅರ್ಹರಾಗಿರುತ್ತಾರೆ ಎಂದು ಷರಿಷ್ಕರಿಸಲು ಕೋರಿರುತ್ತಾರೆ.

ಜವಳಿ ಅಭಿವೃದ್ಧಿ ಆಯುಕ್ತರ ಪ್ರಸ್ತಾವನೆಯನ್ನು ಕೂಲಂಕಷವಾಗಿ ಪರಿಶೀಲಿಸಿ, ನೇಕಾರರ ಅನುಕೂಲಕ್ಕಾಗಿ ಓದಲಾದ(1)ರ ಆದೇಶದಲ್ಲಿರುವ ಷರತ್ತುಗಳನ್ನು ಭಾಗಶಃ ಮಾರ್ಪಡಿನೊಂದಿಗೆ ಮುಂದುವರೆಸುತ್ತಾ, ಈಗಾಗಲೇ ಅನುಮೋದನೆಯಾಗಿರುವ ರೂ.53.64 ಕೋಟಿಗಳ ಮಿತಿಯೊಳಗೆ ಮತ್ತು ಯಾವುದೇ ಹೆಚ್ಚುವರಿ ಕೋರಿಕೆಯನ್ನು ಪರಿಗಣಿಸುವುದಿಲ್ಲವೆಂಬ ಷರತ್ತಿಗೊಳಪಟ್ಟು ಈ ಕೆಳಕಂಡಂತೆ ಪರಿಷ್ಕರಿಸಿ ಆದೇಶಿಸಿದೆ.

**ಸರ್ಕಾರಿ ಆದೇಶ ಸಂಖ್ಯೆ: ವಾಕೈ 57 ಜಕೈಯೋ 2017, ಬೆಂಗಳೂರು, ದಿನಾಂಕ:24.03.2018**

ರಾಜ್ಯದ ನೇಕಾರರು ನೇಕಾರಿಕೆ ಉದ್ದೇಶಕ್ಕಾಗಿ ನೇಕಾರರ ಸಹಕಾರ ಸಂಘಗಳು, ಜಿಲ್ಲಾ ಕೇಂದ್ರ ಸಹಕಾರಿ ಬ್ಯಾಂಕುಗಳು, ಪಟ್ಟಣ ಸಹಕಾರಿ ಬ್ಯಾಂಕುಗಳು, ವಿವಿಧೋದ್ದೇಶ ಸಹಕಾರ ಸಂಘಗಳು, ಕೈಗಾರಿಕಾ ಸಹಕಾರ ಬ್ಯಾಂಕ್‌ಗಳು, ಇತರೆ ಸಹಕಾರಿ ಬ್ಯಾಂಕ್‌ಗಳು, ಸೌಹಾರ್ದ ಸಹಕಾರಿ / ಸೌಹಾರ್ದ ಸಹಕಾರಿ ಬ್ಯಾಂಕ್, ಕೃಷಿ ಪತ್ತಿನ ಸಹಕಾರಿ ಸಂಘಗಳು, ಕೃಷಿಯೇತರ ಪತ್ತಿನ ಸಹಕಾರ ಸಂಘಗಳಿಂದ ಸಾಲ ಪಡೆದು ದಿನಾಂಕ: 30.06.2017ಕ್ಕೆ ಹೊಂದಿರುವ ಹೊರಬಾಕಿಯಲ್ಲಿ ರೂ. 50,000/-ಗಳವರೆಗಿನ (ಐವತ್ತು ಸಾವಿರ ರೂಪಾಯಿಗಳು ಮಾತ್ರ) ಸಾಲ (ಅಸಲು ಮತ್ತು ಬಡ್ಡಿ ಸೇರಿ) ಮನ್ನಾ ಮಾಡುವ ಬಗ್ಗೆ ಹೊರಡಿಸಲಾದ ದಿನಾಂಕ:13.12.2017ರ ಆದೇಶದಲ್ಲಿನ ಷರತ್ತುಗಳಲ್ಲಿನ ಕಂಡಿಕೆ 4 ಅನ್ನು ಈ ಕೆಳಕಂಡಂತೆ ಪರಿಷ್ಕರಿಸಲಾಗಿದೆ. ಉಳಿದಂತೆ ಸರ್ಕಾರಿ ಆದೇಶ ಸಂಖ್ಯೆ:ವಾಕೈ 57 ಜಕೈಯೋ 2017 ದಿನಾಂಕ:20.2.2018ರ ಆದೇಶದಲ್ಲಿನ ಷರತ್ತುಗಳಲ್ಲಿ ಯಾವುದೇ ಬದಲಾವಣೆಗಳಿರುವುದಿಲ್ಲ ಎಂದು ಆದೇಶಿಸಿದೆ.

| ಕ್ರಸಂ | ಸರ್ಕಾರಿ ಆದೇಶದಲ್ಲಿನ ಮೂಲ ಅಂಶಗಳು | ಪರಿಷ್ಕರಿಸಲಾದ ಅಂಶಗಳು |
|---|---|---|
| 4 | ರೂ.50,000/- ಕ್ಕಿಂತ ಹೆಚ್ಚಿಗೆ ಅಲ್ಪಾವಧಿ ನೇಕಾರರ ಸಾಲ ಪಡೆದು ದಿನಾಂಕ: 30.06.2017ಕ್ಕೆ ಹೊರಬಾಕಿಯಿರುವ ಸಾಲವು ಚಾಲ್ತಿ ಇದ್ದಲ್ಲಿ ಸಾಲ ಪಡೆದ ನೇಕಾರರು ಗಡುವು ದಿನಾಂಕ ಅಥವಾ ದಿನಾಂಕ: 30.06.2018 ಇದರಲ್ಲಿ ಯಾವುದು ಮೊದಲೋ ಆ ದಿನಾಂಕದೊಳಗಾಗಿ ರೂ.50,000/-ಕ್ಕಿಂತ ಹೆಚ್ಚಿನ ಅಸಲನ್ನು ಪಾವತಿ ಮಾಡಿದ್ದಲ್ಲಿ ರೂ.50,000/-ವರೆಗಿನ ಮೊತ್ತವನ್ನು ಮನ್ನಾ ಮಾಡಲಾಗುವುದು. | ರೂ.50,000/- ಕ್ಕಿಂತ ಹೆಚ್ಚಿಗೆ ಅಲ್ಪಾವಧಿ / ಮಧ್ಯಮಾವಧಿ ನೇಕಾರರ ಸಾಲ ಪಡೆದು ದಿನಾಂಕ:30.06.2017ಕ್ಕೆ ಹೊರಬಾಕಿಯಿರುವ ಸಾಲವು ಚಾಲ್ತಿ ಇದ್ದಲ್ಲಿ ರೂ.50,000/- ಕ್ಕಿಂತ ಹೆಚ್ಚಿನ ಅಸಲು ಮತ್ತು ಅದಕ್ಕೆ ಸಂವಾದಿಯಾದ ಬಡ್ಡಿಯನ್ನು ಮರುಪಾವತಿ ಮಾಡಲು ಗಡುವು ದಿನಾಂಕ: 30.06.2018ಕ್ಕೆ ಪರಿಷ್ಕರಿಸಿ ವಿಸ್ತರಿಸಲಾಗಿದೆ. |

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

(ರೇವಯ್ಯ)
ಸರ್ಕಾರದ ಉಪ ಕಾರ್ಯದರ್ಶಿ (ಜವಳಿ)
ವಾಣಿಜ್ಯ ಮತ್ತು ಕೈಗಾರಿಕೆ ಇಲಾಖೆ.

**ಇವರಿಗೆ,**

1. ಸಂಕಲನಕಾರರು, ಕರ್ನಾಟಕ ರಾಜ್ಯ ಪತ್ರ, ಬೆಂಗಳೂರು, ಇವರಿಗೆ ಕರ್ನಾಟಕ ರಾಜ್ಯಪತ್ರದಲ್ಲಿ ಕೂಡಲೇ ಪ್ರಕಟಿಸಿ, ಅದರ 250 ಪ್ರತಿಗಳನ್ನು ಒದಗಿಸಲು ಕೋರಿದೆ.

..3

2. ಪ್ರಧಾನ ಮಹಾಲೇಖಪಾಲರು (ಜಿ&ಎಸ್‌ಎಸ್‌ಎ) / (ಇ&ಆರ್‌ಎಸ್‌ಎ) (ಎ&ಇ), ಕರ್ನಾಟಕ ರಾಜ್ಯ, ಬೆಂಗಳೂರು.
3. ಸರ್ಕಾರದ ಮುಖ್ಯ ಕಾರ್ಯದರ್ಶಿಯವರು, ವಿಧಾನಸೌಧ, ಬೆಂಗಳೂರು.
4. ಸನ್ಮಾನ್ಯ ಮುಖ್ಯಮಂತ್ರಿಗಳ ಪ್ರಧಾನ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು.
5. ಮಾನ್ಯ ಜವಳಿ ಮತ್ತು ಮುಜರಾಯಿ ಸಚಿವರ ಆಪ್ತ ಕಾರ್ಯದರ್ಶಿ, ವಿಕಾಸಸೌಧ, ಬೆಂಗಳೂರು.
6. ಜವಳಿ ಅಭಿವೃದ್ಧಿ ಆಯುಕ್ತರು ಹಾಗೂ ನಿರ್ದೇಶಕರು, ಕೈಮಗ್ಗ ಮತ್ತು ಜವಳಿ ಇಲಾಖೆ, "ಶುಭೋದಯ ಕಾಂಪ್ಲೆಕ್ಸ್" ನಂ. 86, ರೈಲ್ವೆ ಪ್ಯಾರಲಲ್ ರಸ್ತೆ, ಕುಮಾರ ಪಾರ್ಕ್ ಪಶ್ಚಿಮ, ಬೆಂಗಳೂರು-560 020.
7. ಅಧೀನ ಕಾರ್ಯದರ್ಶಿ, ಆರ್ಥಿಕ ಇಲಾಖೆ ವೆಚ್ಚ-1, ವಿಧಾನ ಸೌಧ, ಬೆಂಗಳೂರು.
8. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ಕೈಮಗ್ಗ ಅಭಿವೃದ್ಧಿ ನಿಗಮ ನಿ., ಬೆಂಗಳೂರು.
9. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ರಾಜ್ಯ ಜವಳಿ ಮೂಲಸೌಲಭ್ಯ ಅಭಿವೃದ್ಧಿ ನಿಗಮ ನಿ., ಬೆಂಗಳೂರು.
10. ನಿರ್ದೇಶಕರು, ರಾಜ್ಯ ಹುಜೂರ್ ಖಜಾನೆ, ನೃಪತುಂಗ ರಸ್ತೆ, ಬೆಂಗಳೂರು.
11. ಜಂಟಿ ನಿರ್ದೇಶಕರು, ಜಿಲ್ಲಾ ಖಜಾನೆ, ಬೆಂಗಳೂರು.

<u>ಪ್ರತಿಯನ್ನು:-</u>

1. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ ಹಾಗೂ ಅಭಿವೃದ್ಧಿ ಆಯುಕ್ತರು, ಇವರ ಆಪ್ತ ಕಾರ್ಯದರ್ಶಿಯವರಿಗೆ, ವಿಧಾನಸೌಧ, ಬೆಂಗಳೂರು.
2. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ವಾಣಿಜ್ಯ ಮತ್ತು ಕೈಗಾರಿಕೆ ಇಲಾಖೆ, ಇವರ ಆಪ್ತ ಕಾರ್ಯದರ್ಶಿಯವರಿಗೆ, ಬೆಂಗಳೂರು.
3. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ ಇವರ ಆಪ್ತ ಕಾರ್ಯದರ್ಶಿಯವರಿಗೆ, ಆರ್ಥಿಕ ಇಲಾಖೆ, ವಿಧಾನಸೌಧ, ಬೆಂಗಳೂರು.
4. ಸರ್ಕಾರದ ಪ್ರಧಾನ ಕಾರ್ಯದರ್ಶಿ ಇವರ ಆಪ್ತ ಕಾರ್ಯದರ್ಶಿಯವರಿಗೆ, ಯೋಜನಾ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
5. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿ.